**Bangalore**
**Regional News**
**25.06.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

ಮುಖ್ಯಾಂಶಗಳು

೧. ಭಾರತದ ಶುಭಾಂಶು ಶುಕ್ಲಾ ಸೇರಿ ನಾಲ್ವರು ಗಗನಯಾತ್ರಿಗಳ ಅಂತರಿಕ್ಷಕ್ಕೆ ಯಶಸ್ವಿ ಉಡ್ಡಯನ

೨. ಇಂಜಿನಿಯರಿಂಗ್ ಸೀಟು ಹಗರಣ - ಬೆಂಗಳೂರು ಸೇರಿ ರಾಜ್ಯದ ೧೮ ಕಡೆ ಇಡಿ ಅಧಿಕಾರಿಗಳ ದಾಳಿ

೩. ರಾಜ್ಯಸರ್ಕಾರದಲ್ಲಿ ಹಣವಿಲ್ಲ ಎಂದು ಹೇಳಿಲ್ಲ - ಗೃಹ ಸಚಿವ ಡಾ.ಜಿ.ಪರಮೇಶ್ವರ್ ಸ್ಪಷ್ಟನೆ

೪. ರಾಜ್ಯದ ವಿವಿಧೆಡೆ ಧಾರಾಕಾರ ಮಳೆ - ಕೆಆರ್‌ಎಸ್ ನದಿ ಪಾತ್ರದಲ್ಲಿ ಪ್ರವಾಹ ಭೀತಿ

**><><><><><><><><**

ಭಾರತದ ಗಗನಯಾತ್ರಿ ಶುಭಾಂಶು ಶುಕ್ಲಾ ಬಾಹ್ಯಾಕಾಶ ನಿಲ್ದಾಣಕ್ಕೆ ಪ್ರಯಾಣ ಬೆಳೆಸಿದ್ದಾರೆ. ಶುಭಾಂಶು ಶುಕ್ಲಾ ಮತ್ತು ಇತರ ಮೂವರು ಸಿಬ್ಬಂದಿಯನ್ನು ಹೊತ್ತ ಆಕ್ಸಿಯಮ್ ೪ ಮಿಷನ್ ಫ್ಲೋರಿಡಾದ ಕೆನಡಿ ಬಾಹ್ಯಾಕಾಶ ಕೇಂದ್ರದಿಂದ ಅಂತಾರಾಷ್ಟ್ರೀಯ ಬಾಹ್ಯಾಕಾಶ ಕೇಂದ್ರಕ್ಕೆ ಪ್ರಯಾಣ ಬೆಳೆಸಿದೆ. ಬಾಹ್ಯಾಕಾಶಕ್ಕೆ ತೆರಳುವ ವೇಳೆ ಮಾತನಾಡಿರುವ ಶುಕ್ಲಾ ಇದು ತನ್ನ ವೈಯಕ್ತಿಕ ಪ್ರಯಾಣವಲ್ಲ, ಭಾರತದ ಮಾನವ ಬಾಹ್ಯಾಕಾಶ ಪ್ರಯಾಣವಾಗಿದೆ. ತನ್ನೊಂದಿಗೆ ಭಾರತದ ಧ್ವಜವನ್ನು ಕೊಂಡೊಯ್ಯುತ್ತಿದ್ದೇನೆ.' ಎಂದು ತಿಳಿಸಿದ್ದಾರೆ. ೪೧ ವರ್ಷಗಳ ನಂತರ ಭಾರತವು ಬಾಹ್ಯಕಾಶಕ್ಕೆ ಗಗನಯಾತ್ರಿಯನ್ನು ಕಳುಹಿಸಿದೆ. ೧೯೮೪ರಲ್ಲಿ ತೆರಳಿದ್ದ ರಾಕೇಶ್ ಶರ್ಮಾ ಬಳಿಕ ಶುಕ್ಲಾ ಬಾಹ್ಯಾಕಾಶಕ್ಕೆ ತೆರಳಿದ ಎರಡನೇ ಭಾರತೀಯನಾಗಿದ್ದಾರೆ. ಈ ಕುರಿತಂತೆ ಬೆಂಗಳೂರಿನ ಜವಹಾರ್‌ಲಾಲ್ ನೆಹರೂ ತಾರಾಲಯದ ನಿರ್ದೇಶಕರಾದ ಡಾ. ಬಿ. ಆರ್. ಗುರುಪ್ರಸಾದ್ ಆಕಾಶವಾಣಿಗೆ ಪ್ರತಿಕ್ರಿಯೆ ನೀಡಿದ್ದಾರೆ.

**ಧ್ವನಿ : ಡಾ. ಬಿ. ಆರ್. ಗುರುಪ್ರಸಾದ್, ಜವಹಾರ್‌ಲಾಲ್ ನೆಹರೂ ತಾರಾಲಯ ನಿರ್ದೇಶಕ**

**><><><><><><><><**

ಇಂಜಿನಿಯರಿಂಗ್ ಸೀಟು ಹಗರಣಕ್ಕೆ ಸಂಬಂಧಿಸಿದಂತೆ ಬೆಂಗಳೂರು ಸೇರಿದಂತೆ ರಾಜ್ಯದ ೧೮ ಸ್ಥಳಗಳಲ್ಲಿ ಜಾರಿ ನಿರ್ದೇಶನಾಲಯದ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಬೆಂಗಳೂರಿನ ಬಿಎಮ್‌ಎಸ್ ಇಂಜಿನಿಯರಿಂಗ್ ಕಾಲೇಜು, ಆಕಾಶ್ ಇಂಜಿನಿಯರಿಂಗ್ ಕಾಲೇಜುಗಳ ಮೇಲೆ ದಾಳಿ ನಡೆದಿದೆ. ಎಐಸಿಟಿಇ, ಯುಜಿಸಿ ನಿಯಮ ಉಲ್ಲಂಘಿಸಿ ಮೆರಿಟ್ ಸೀಟ್ ಹಂಚಿಕೆ ಮಾಡದೆ, ಅಕ್ರಮವಾಗಿ ಏಜೆಂಟ್ ಮೂಲಕ ಸೀಟ್ ಹಂಚಿಕೆ ಮಾಡಲಾಗಿತ್ತು. ಈ ಮೂಲಕ ಖಾಸಗಿ ಕಾಲೇಜುಗಳು ಕೋಟ್ಯಾಂತರ ರೂಪಾಯಿ ಹಣ ಸಂಗ್ರಹ ಮಾಡಿರುವ ಆರೋಪ ಕೇಳಿಬಂದಿತ್ತು. ಬೆಂಗಳೂರು

ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ಬಳಿ ಇರುವ ಆಕಾಶ್ ಇಂಜಿನಿಯರಿಂಗ್ ಕಾಲೇಜು ಮೇಲೆ ಎರಡನೆ ಬಾರಿಗೆ ದಾಳಿ ಮಾಡಿರುವ ಅಧಿಕಾರಿಗಳು ದಾಖಲೆಗಳನ್ನು ಪರಿಶೀಲನೆ ನಡೆಸಿದ್ದಾರೆ.

><><><><><><><

ರಾಜ್ಯ ಸರ್ಕಾರದಲ್ಲಿ ಹಣವಿಲ್ಲ ಎಂದು ತಾವು ಹೇಳಿಲ್ಲ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಮ್ಮ ಹೇಳಿಕೆಯನ್ನು ತಪ್ಪಾಗಿ ಅರ್ಥೈಸಲಾಗಿದ್ದು, ರಾಜ್ಯದ ಆರ್ಥಿಕ ಸ್ಥಿತಿ ಸುಭದ್ರವಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಬಾದಾಮಿಯನ್ನು ಸಂರಕ್ಷಿಸಲು ೧ಸಾವಿರ ಕೋಟಿ ರೂಪಾಯಿಗಳ ಅಗತ್ಯವಿದ್ದು ಇಷ್ಟು ದೊಡ್ಡ ಮೊತ್ತ ಹಂಚಿಕೆಮಾಡಲು ಸಾಧ್ಯವಿಲ್ಲ. ಕೇಂದ್ರಸರ್ಕಾರ ಹಣ ಒದಗಿಸಿದರೆ ಅದು ಸಹಾಯಕವಾಗಲಿದೆ ಎಂದು ಹೇಳಿದ್ದೆ ಎನ್ನುವ ಮೂಲಕ ತಮ್ಮ ಹೇಳಿಕೆಯನ್ನು ಸಮರ್ಥಿಸಿಕೊಂಡಿದ್ದಾರೆ. ಶಾಸಕರ ಸಮಸ್ಯೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಬಗೆಹರಿಸಲಿದ್ದಾರೆ ಎಂದು ಇದೇ ವೇಳೆ ತಿಳಿಸಿದ್ದಾರೆ.

><><><><><><><

ಬೆಂಗಳೂರು ನಗರಾಭಿವೃದ್ಧಿ ಸಚಿವರೂ ಆಗಿರುವ ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಇಂದು ಹೆಬ್ಬಾಳ ಮೇಲ್ಸೇತುವೆ ಕಾಮಗಾರಿ ಸ್ಥಳ ಪರಿಶೀಲಿಸಿದರು. ಈ ವೇಳೆ ಕಾಮಗಾರಿ ಶೀಘ್ರ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಈ ಸಂದರ್ಭದಲ್ಲಿ ಮುಖ್ಯ ಬಿಬಿಎಂಪಿ ಆಯುಕ್ತರಾದ ಮಹೇಶ್ವರ್ ರಾವ್, ಸೇರಿದಂತೆ ಹಲವು ಅಧಿಕಾರಿಗಳು ಉಪಸ್ಥಿತರಿದ್ದರು.

><><><><><><><

ರಾಜ್ಯದಲ್ಲಿ ಆರಿದ್ರಾ ಮಳೆ ಜೋರಾಗಿದೆ. ಶಿವಮೊಗ್ಗದಲ್ಲಿ ದಾರಾಕಾರ ಮಳೆಯಾಗುತ್ತಿದ್ದು ಮುನ್ನೆಚ್ಚರಿಕೆ ಕ್ರಮವಾಗಿ ಹೊಸನಗರ ತಾಲೂಕಿನ ಶಾಲೆ, ಕಾಲೇಜುಗಳಿಗೆ ಇಂದು ರಜೆ ಘೋಷಿಸಲಾಗಿದೆ. ಹೊಸನಗರ ತಾಲೂಕಿನ ಅಂಗನವಾಡಿಗಳು, ಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳಿಗೆ ರಜೆ ಘೋಷಿಸಿ ತಹಶೀಲ್ದಾರ್ ರಶ್ಮಿ ಹಾಲೇಶ್ ಆದೇಶಿಸಿದ್ದಾರೆ. ಕಳೆದ ೨೪ ಗಂಟೆಯಲ್ಲಿ ಮಾಣಿ ಜಲಾಶಯದ ವ್ಯಾಪ್ತಿಯಲ್ಲಿ ೧೨೮ ಮಿಲಿ ಮೀಟರ್, ಮಳೆಯಾಗಿದೆ. ಯಡೂರಿನಲ್ಲಿ ೧೪೬ ಮಿಲಿಮೀಟರ್ , ಹುಲಿಕಲ್‌ನಲ್ಲಿ ೧೨೨ ಮಿಲಿಮೀಟರ್, ಮಾಸ್ತಿಕಟ್ಟೆಯಲ್ಲಿ ೧೩೮ ಮಿಲಿಮೀಟರ್, ಚಕ್ರಾ ವ್ಯಾಪ್ತಿಯಲ್ಲಿ ೧೬೯ ಮಿಲಿಮೀಟರ್, ಸಾವೇಹಕ್ಲು ವ್ಯಾಪ್ತಿಯಲ್ಲಿ ೬೪ ಮಿಲಿಮೀಟರ್ ಮಳೆಯಾಗಿದೆ.

><><><><><><><

ಮಡಿಕೇರಿ ಸೇರಿದಂತೆ ಕೊಡಗು ಜಿಲ್ಲೆಯ ಬಹುತೇಕ ಕಡೆ ಧಾರಾಕಾರ ಮಳೆಯಾಗುತ್ತಿದೆ. ಕಳೆದ ೪೮ ಗಂಟೆಗಳಿಂದ ಜಿಲ್ಲೆಯಲ್ಲಿ ಬಾರೀ ಮಳೆ ಮತ್ತು ಗಾಳಿ ಬೀಸುತ್ತಿದೆ. ಮಳೆ ಹೆಚ್ಚಾದ ಹಿನ್ನಲೆಯಲ್ಲಿ ಕೊಡಗಿನ ಶಾಲೆಗಳಿಗೆ ಇಂದು ರಜೆ ನೀಡಲಾಗಿದೆ. ಮಳೆ ಹಾನಿ ಪ್ರದೇಶಗಳಿಗೆ ಜಿಲ್ಲಾಧಿಕಾರಿ ವೆಂಕಟ್ ರಾಜಾ ಭೇಟಿ ನೀಡಿ ಪರಿಸ್ಥಿತಿ ಅವಲೋಕಿಸಿದ್ದಾರೆ. ಹಾರಂಗಿ ಜಲಾನಯನ ವ್ಯಾಪ್ತಿಯಲ್ಲಿ ಉತ್ತಮ ಮಳೆಯಾಗುತ್ತಿರುವುದರಿಂದಾಗಿ ಹಾರಂಗಿ ಜಲಾಶಯಕ್ಕೆ ಒಳಹರಿವು ಹೆಚ್ಚಾಗಿದ್ದು ಇಂದು ೪ಸಾವಿರದ ೫೦೦ ಕ್ಯೂಸೆಕ್ ನೀರು ಅಣೆಕಟ್ಟಿಗೆ ಹರಿದು ಬರುತ್ತಿದೆ. ಹಾರಂಗಿಯಿಂದ ನದಿಗೆ ೫ ಸಾವಿರ ಕ್ಯೂಸೆಕ್ ನೀರನ್ನು ಹೊರ ಬಿಡಲಾಗುತ್ತಿದೆ.

><><><><><><><><

ಕಾವೇರಿ ಜಲಾನಯನ ಪ್ರದೇಶದಲ್ಲಿ ನಿರಂತರ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣ ತಾಲ್ಲೂಕಿನ ಕೃಷ್ಣರಾಜ ಸಾಗರ ಅಣೆಕಟ್ಟೆ ಭರ್ತಿಯಾಗಿ ಪ್ರವಾಹದ ಭೀತಿ ಎದುರಾಗಿದೆ. ಇಂದು ಅಣೆಕಟ್ಟೆಯಿಂದ ನದಿಗೆ ಸುಮಾರು ೩೦ರಿಂದ ೫೦ ಸಾವಿರ ಕ್ಯೂಸೆಕ್ ನೀರನ್ನು ಬಿಡಲಿದ್ದು, ನದಿ ಪಾತ್ರದ ಜನರು ಎಚ್ಚರಿಕೆ ವಹಿಸುವಂತೆ ಕೃಷ್ಣರಾಜ ಸಾಗರದ ಕಾವೇರಿ ನೀರಾವರಿ ನಿಗಮದ ಕಾರ್ಯಪಾಲಕ ಇಂಜಿನಿಯರ್ ಕಚೇರಿಯ ಅಧಿಕಾರಿಗಳು ಪ್ರಕಟಣೆ ಹೊರಡಿಸಿದ್ದಾರೆ. ನದಿಗೆ ನೀರು ಬಿಡುತ್ತಿದ್ದಂತೆಯೇ ನದಿ ವ್ಯಾಪ್ತಿಯ ಪ್ರವಾಸಿ ತಾಣಗಳಲ್ಲೂ ಮುಂಜಾಗ್ರತಾ ಕ್ರಮ ವಹಿಸಲಾಗಿದ್ದು, ಶ್ರೀರಂಗಪಟ್ಟಣ ತಾಲ್ಲೂಕಿನ ನದಿ ತೀರದ ಪ್ರದೇಶಗಳಾದ ರಂಗನತಿಟ್ಟು, ಸ್ನಾನಘಟ್ಟ, ವೆಲ್ಲೆಸ್ಲಿ ಸೇತುವೆ, ನಿಮಿಷಾಂಭ ದೇವಸ್ಥಾನ, ಸಂಗಮ, ಘೋಸಾಯಿ ಘಾಟ್, ಪಶ್ಚಿಮ ವಾಹಿನಿ ಸ್ಥಳಗಳಲ್ಲಿ ನದಿಗೆ ಇಳಿಯದಂತೆ ಹಾಗೂ ನದಿಗೆ ಇಳಿದು ಪಿಂಡ ಪ್ರದಾನ ಮತ್ತು ಅಸ್ತಿ ವಿಸರ್ಜನೆ ಮಾಡದಂತೆ ಶ್ರೀರಂಗಪಟ್ಟಣ ತಹಸೀಲ್ದಾರ್ ಆದೇಶ ಹೊರಡಿಸಿದ್ದಾರೆ. ಮಂಡ್ಯ ಜಿಲ್ಲೆಯ ಮಳವಳ್ಳಿ ತಾಲ್ಲೂಕಿನ ಪ್ರಸಿದ್ಧ ಯಾತ್ರಾ ಸ್ಥಳ ಮುತ್ತತ್ತಿಯಲ್ಲೂ ನೀರಿಗಿಳಿಯದಂತೆ ಹಾಗೂ ಅಸ್ತಿ ವಿಸರ್ಜನೆ ಮಾಡದಂತೆ ನಿರ್ಬಂಧ ವಿಧಿಸಿ ಮಳವಳ್ಳಿ ತಹಸೀಲ್ದಾರ್ ಆದೇಶಿಸಿದ್ದಾರೆ. ಎಲ್ಲಾ ಜಲಪಾತಗಳಲ್ಲಿ ಈ ವರ್ಷ ವಾಡಿಕೆಗೆ ಮುಂಚೆಯೇ ಜಲವೈಭವ ಆರಂಭವಾಗಿದೆ. ಆಗಸ್ಟ್ ವೇಳೆಯಲ್ಲಿ ಪ್ರವಾಸಿಗರನ್ನು ಆಕರ್ಷಿಸುತ್ತಿದ್ದ ಗಗನಚುಕ್ಕಿ ಜೂನ್ ಅಂತ್ಯದಿಂದಲೇ ಪ್ರವಾಸಿಗರನ್ನು ಕೈ ಬೀಸಿ ಕರೆಯುತ್ತಿದೆ.

><><><><><><><><

ಉಡುಪಿಯಲ್ಲಿ ತೋಟಗಾರಿಕೆ ಇಲಾಖೆ ವತಿಯಿಂದ ಪ್ರಸಕ್ತ ಸಾಲಿನಲ್ಲಿ ಮರು ವಿನ್ಯಾಸಗೊಳಿಸಿದ ಹವಾಮಾನಾಧಾರಿತ ಬೆಳೆ ವಿಮೆ ಕಾರ್ಯಕ್ರಮದಡಿ ಅಡಿಕೆ ಮತ್ತು ಕಾಳುಮೆಣಸು ಬೆಳೆಗಳಿಗೆ ಹವಾಮಾನ ವೈಪರಿತ್ಯದಿಂದಾಗಿ ಉಂಟಾಗುವ ಬೆಳೆ ನಷ್ಟಕ್ಕೆ ಮುಂಗಾರು ಹಂಗಾಮಿಗೆ ಈ ಯೋಜನೆಯಡಿ ನೊಂದಣಿ ಮಾಡಿಕೊಳ್ಳಲು ರೈತರಿಗೆ ಅವಕಾಶ ಕಲ್ಪಿಸಲಾಗಿದೆ. ರೈತರ ಪಹಣಿಯಲ್ಲಿ ಬೆಳೆ ಸಮೀಕ್ಷೆಯಲ್ಲಿ ಅಡಿಕೆ ಮತ್ತು ಕಾಳುಮೆಣಸು ನಮೂದಾಗಿರುವ ಬೆಳೆ ವಿಸ್ತೀರ್ಣಕ್ಕೆ ಅನುಗುಣವಾಗಿ ವಿಮಾ ಮೊತ್ತವನ್ನು ಪಾವತಿಸಿ ಯೋಜನೆಯಲ್ಲಿ ಪಾಲ್ಗೊಳ್ಳಬಹುದಾಗಿದೆ. ಯೋಜನೆಯಡಿ ನೊಂದಣಿ ಮಾಡಿಕೊಳ್ಳಲು ಜೂನ್ ೩೦ ಕೊನೆಯ ದಿನವಾಗಿದೆ ಎಂದು ತೋಟಗಾರಿಕೆ ಇಲಾಖೆಯ ಉಪನಿರ್ದೇಶಕರ ಕಛೇರಿ ಪ್ರಕಟಣೆ ತಿಳಿಸಿದೆ.

><><><><><><><><

ಅಂತಾರಾಷ್ಟ್ರೀಯ ಮಾದಕ ದ್ರವ್ಯ ವಸ್ತುಗಳ ನಿರ್ಮೂಲನಾ ದಿನಾಚರಣೆಯ ಅಂಗವಾಗಿ ಗದಗ ಬೆಟಗೇರಿ ಅವಳಿ ನಗರದಲ್ಲಿ ಗದಗ ಜಿಲ್ಲಾ ಪೊಲೀಸ್ ಇಲಾಖೆಯ ವತಿಯಿಂದ ಜಾಥಾ ನಡೆಯಿತು.

><><><><><><><><

ರಾಮನಗರ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಬ್ಯಾಂಕ್‌ಗಳು ಸಾರ್ವಜನಿಕರಿಗೆ ಕೃಷಿ, ವ್ಯಾಪಾರಕ್ಕೆ ಸಾಲ, ಗೃಹ ಸಾಲ, ವಿದ್ಯಾಭ್ಯಾಸ ಸಾಲಕ್ಕೆ ಒತ್ತು ನೀಡಬೇಕು ಎಂದು ಬೆಂಗಳೂರು ಗ್ರಾಮಾಂತರ ಸಂಸದ ಡಾ. ಸಿ.ಎನ್. ಮಂಜುನಾಥ್ ತಿಳಿಸಿದ್ದಾರೆ. ೨೦೨೪-೨೫ನೇ ಸಾಲಿನ ಬ್ಯಾಂಕುಗಳ ಜಿಲ್ಲಾ ಸಲಹಾ ಸಮಿತಿ ಮತ್ತು ಜಿಲ್ಲಾ ಮಟ್ಟದ ಪರಿಶೀಲನಾ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು, ಪ್ರತೀ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ವಿಮಾ ಅಭಿಯಾನ ಆಯೋಜಿಸಿ, ಜನರಲ್ಲಿ ಈ ಕುರಿತು ಅರಿವು ಮೂಡಿಸುವಂತೆ ಕರೆ ನೀಡಿದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಅನ್ಮೋಲ್ ಜೈನ್ ಮಾತನಾಡಿ, ಜಿಲ್ಲೆಯಲ್ಲಿ ಎಲ್ಲಾ ಬ್ಯಾಂಕುಗಳು ಹೆಚ್ಚಿನ ಸಾಲ ಸೌಲಭ್ಯವನ್ನು ತ್ವರಿತಗತಿಯಲ್ಲಿ ಜನರಿಗೆ ಒದಗಿಸಬೇಕು ಎಂದು ತಿಳಿಸಿದರು.

><><><><><><><><

೧. ಮಂಡ್ಯ ಜಿಲ್ಲೆಯ ವಿ.ಸಿ.ನಾಲೆಯ ಸುತ್ತಲಿನ ರಸ್ತೆಗಳಲ್ಲಿ ಅಪಘಾತಗಳನ್ನು ತಡೆಗಟ್ಟಲು ಹೆಚ್ಚು ಅಪಘಾತವಾಗುವ ವಲಯಗಳನ್ನು ಗುರುತಿಸಿ ೩೫ ಕಿಲೋ ಮೀಟರ್ ವ್ಯಾಪ್ತಿಯಲ್ಲಿ ವಿವಿಧ ಇಲಾಖೆಗಳಿಂದ ರಸ್ತೆ ತಡೆಗೋಡೆ ನಿರ್ಮಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಕುಮಾರ ತಿಳಿಸಿದ್ದಾರೆ.

೨. ಸಾರ್ವಜನಿಕ ವಿತರಣಾ ಪದ್ಧತಿಯ ಅನ್ನಭಾಗ್ಯ ಯೋಜನೆಯಡಿ ಅಂತ್ಯೋದಯ ಅನ್ನ ಯೋಜನೆ ಹಾಗೂ ಬಿಪಿಎಲ್ ಪಡಿತರ ಚೀಟಿಯಲ್ಲಿನ ಎಲ್ಲಾ ಸದಸ್ಯರುಗಳು ಕಡ್ಡಾಯವಾಗಿ ಜೂನ್ ೩೦ರೊಳಗೆ ಇ-ಕೆವೈಸಿ ಮಾಡಿಕೊಳ್ಳುವಂತೆ ವಿಜಯಪುರ ಜಿಲ್ಲಾಧಿಕಾರಿ ಟಿ.ಭೂಬಾಲನ್ ತಿಳಿಸಿದ್ದಾರೆ.

><><><><><><><><